ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಸರ್ಕಾರಿ ಪ್ರಾಥಮಿಕ ಶಾಲೆಗಳು : 13

ಸರ್ಕಾರಿ ಪ್ರೌಢ ಶಾಲೆಗಳು : 02

ಆ) ಎಲ್ಲಾ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಪೀಠೋಪಕರಣ ಸೌಲಭ್ಯವಿದೆ. ಎಲ್ಲಾ ಪ್ರೌಢಾಲೆಗಳಲ್ಲಿ ಕೊಠಡಿಗಳ ಸೌಲಭ್ಯವಿದೆ.

1. ಪ್ರಾಥಮಿಕ ಶಾಲೆಯಲ್ಲಿ ಶೌಚಾಲಯ ಹಾಗೂ ಗ್ರಂಥಾಲಯವಿರುವುದಿಲ್ಲ.
2. ಪ್ರಾಥಮಿಕ ಶಾಲೆಗಳಲ್ಲಿ ಗ್ರಂಥಾಲಯ ಹಾಗೂ ಆಟದ ಮೈದಾನವಿರುವುದಿಲ್ಲ.
3. ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಪ್ರಯೋಗಾಲಯ ಸಾಮಗ್ರಿಗಳಿದ್ದು ಪ್ರತ್ಯೇಕ ಕೊಠಡಿ ಇರುವುದಿಲ್ಲ.

ಇ) ಸರ್ವ ಶಿಕ್ಷಾ ಅಭಿಯಾನದಡಿಯಲ್ಲಿ 2003–04ನೇ ಸಾಲಿನಲ್ಲಿ ಅಗತ್ಯವಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಕೊಠಡಿ ನಿರ್ಮಾಣ, ಕುಡಿಯುವ ನೀರು, ಶೌಚಾಲಯ ನಿರ್ಮಾಣಕ್ಕಾಗಿ ರೂ. 1.85ಲಕ್ಷಗಳನ್ನು ಬಿಡುಗಡೆ ಮಾಡಿ, ಸದರಿ ಸೌಕರ್ಯಗಳನ್ನು ಆದ್ಯತೆ ಮೇರೆಗೆ ಒದಗಿಸಲು ಕ್ರಮ ಕೈಗೊಳ್ಳಲಾಗಿದೆ.

ಈ) 2003–04ನೇ ಸಾಲಿನಲ್ಲಿ ಶೈಕ್ಷಣಿಕವಾಗಿ ಶಿವಾಜಿನಗರ ವಿಧಾನಸಭಾ ಕ್ಷೇತ್ರಕ್ಕೆ ಸರ್ವ ಶಿಕ್ಷಾ ಅಭಿಯಾನ ದಡಿಯಲ್ಲಿ ಕೆಳಕಂಡಂತೆ ಮೂಲಭೂತ ಸೌಕರ್ಯಗಳಿಗೆ ಖರ್ಚು ಮಾಡಲಾಗುತ್ತಿದೆ.

1. ಒಂದು ಶಾಲೆಯ ಶೌಚಾಲಯ ನಿರ್ಮಾಣಕ್ಕೆ ರೂ. 25,000.00
2. ಒಂದು ಶಾಲೆಗೆ ಕುಡಿಯುವ ನೀರಿನ ವ್ಯವಸ್ಥೆಗೆ ರೂ. 10,000.00
3. ಒಂದು ಶಾಲೆಯ ಕಟ್ಟಡ ನಿರ್ಮಾಣಕ್ಕೆ ರೂ. 1.50 ಲಕ್ಷ

ರಾಜ್ಯದಲ್ಲಿ ಆಯುರ್ವೇದ ವೈದ್ಯರುಗಳ ನೇಮಕಾತಿ

4092 (4718) : ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ವಿವಿಧ ಭಾಗಗಳಲ್ಲಿರತಕ್ಕ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯಗಳಲ್ಲಿ ಖಾಲಿ ಇರತಕ್ಕ ಆಯುರ್ವೇದದ ವೈದ್ಯರ ಹುದ್ದೆಗೆ (ದರ್ಜೆ–2) ನೇಮಕಾತಿ ಮಾಡಿಕೊಳ್ಳಲು ಸರ್ಕಾರ ವಿಶೇಷ ಸಮಿತಿಯನ್ನು ರಚಿಸಿದೆಯೇ;

ಆ) ಹಾಗಿದ್ದಲ್ಲಿ, ಖಾಲಿ ಇರತಕ್ಕ ಎಲ್ಲಾ ಹುದ್ದೆಗಳಿಗೆ ವಿಶೇಷ ನೇಮಕಾತಿ ಸಮಿತಿ ವೈದ್ಯರುಗಳನ್ನು ನೇಮಕಾತಿ ಮಾಡಿದೆಯೇ;

ಇ) ಇಲ್ಲದಿದ್ದಲ್ಲಿ, ಕಾರಣಗಳೇನು;

ಈ) ಯಾವಾಗ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು?

ಶ್ರೀಮತಿ ನಫೀಸ್ ಫಜಲ್ (ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು):

ಅ) ಹೌದು.

ಆ) ಇಲ್ಲ

ಇ) ನೇಮಕಾತಿಯ ಪ್ರಕ್ರಿಯೆಯ ಮುಂದುವರಿದಿದೆ.

ಈ) ನೇಮಕಾತಿಯ ಪ್ರಕ್ರಿಯೆಯ ಮುಂದುವರಿದಿದೆ.

ಬೆಳಗಾವಿ ಜಿಲ್ಲೆಯ ಮುರಗೋಡ ಗ್ರಾಮದಲ್ಲಿ ಕುಡಿಯುವ ನೀರಿನ ತೊಂದರೆ

4093 (4527) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ವಿಶ್ವಬ್ಯಾಂಕ್ ಯೋಜನೆಯಡಿಯಲ್ಲಿ ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಮುರಗೋಡು ಗ್ರಾಮದಲ್ಲಿ ಕೆಲಸಗಳನ್ನು ತೆಗೆದುಕೊಂಡ ಸಂಗತಿ ನಿಜವೇ;

ಆ) ಆ ಗ್ರಾಮದಲ್ಲಿ ತೆಗೆದುಕೊಂಡ ಕೆಲಸಗಳು ಕಳಪೆಯಾಗಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಆ ಗ್ರಾಮದಲ್ಲಿ ಕೆಲಸಗಳು ಕಳಪೆಯಾಗಿರುವುದರಿಂದ ಕುಡಿಯುವ ನೀರಿನ ತೊಂದರೆಯನ್ನು ಆ ಗ್ರಾಮಸ್ಥರು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಕೂಡಲೇ ಆ ಗ್ರಾಮಕ್ಕೆ ಕುಡಿಯುವ ನೀರಿನ ತೊಂದರೆಯನ್ನು ಹೋಗಲಾಡಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಕೆ.ಬಿ. ಕೋಳಿವಾಡ್ (ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು):

ಅ) ವಿಶ್ವಬ್ಯಾಂಕ್ ಯೋಜನೆಯಡಿಯಲ್ಲಿ ಬೆಳಗಾವಿ ಜಿಲ್ಲಾ ಸವದತ್ತಿ ತಾಲ್ಲೂಕಿನ ಮುರಗೋಡು ಗ್ರಾಮದಲ್ಲಿ ಕುಡಿಯುವ ನೀರು ಸರಬರಾಜು ಕೆಲಸಗಳನ್ನು ತೆಗೆದುಕೊಂಡಿರುವುದು ನಿಜವಾಗಿರುತ್ತದೆ.

ಆ) ಆ ಗ್ರಾಮದಲ್ಲಿ ತೆಗೆದುಕೊಂಡ ಕೆಲಸಗಳು ವಿಶ್ವಬ್ಯಾಂಕ್ ನಿಯಮಗಳಂತೆ ಆಗಿದ್ದು ಕೆಲಸಗಳನ್ನು ಪರಿಶೀಲಿಸಲಾಗಿದೆ. ಈ ಕೆಲಸಗಳು ಕಳಪೆಮಟ್ಟದ್ದಾಗಿರುವುದಾಗಿ ಜನರು ನೇರವಾಗಿ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದು, ಈ ಬಗ್ಗೆ ಲೋಕಾಯುಕ್ತವು ತನಿಖೆ ಕೈಗೊಂಡಿರುತ್ತದೆ.

ಇ) ಈ ಗ್ರಾಮದಲ್ಲಿ ಅಂತರ ಜಲದ ಮಟ್ಟ ಕುಸಿದಿರುವುದರಿಂದಾಗಿ ಕೆಲವು ಕೊಳವೆ ಬಾವಿಗಳು ವಿಫಲಗೊಂಡಿದ್ದು ಗ್ರಾಮಕ್ಕೆ ಬೇಕಾದಷ್ಟು ನೀರು ಸಿಗದೇ ಗ್ರಾಮಸ್ಥರಿಗೆ ತೊಂದರೆಯಾಗಿರುತ್ತದೆ.

ಈ) ಮುರಗೋಡು ಗ್ರಾಮದ ನೀರು ಸರಬರಾಜು ಮತ್ತು ನೈರ್ಮಲ್ಯ ಯೋಜನೆಯ ಕಾಮಗಾರಿಯನ್ನು ಪೂರ್ಣಗೊಳಿಸಿ ಕಾರ್ಯಾರಂಭ ಮಾಡಲಾಗಿರುತ್ತದೆ. ಕಾರ್ಯಾರಂಭಗೊಂಡಿರುವ ಈ ಕಾಮಗಾರಿಯನ್ನು ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿಗೆ ದಿನಾಂಕ 15.10.2001 ರಂದು ಕಾರ್ಯಾಚರಣೆ ಮತ್ತು ನಿರ್ವಹಣೆಗಾಗಿ ಹಸ್ತಾಂತರಿಸಲಾಗಿರುತ್ತದೆ.

ವಿದೇಶಿ ನೆರವಿನಿಂದ ಅನುಷ್ಠಾನಗೊಳಿಸಿ ಗ್ರಾಮ ನೀರು ಸರಬರಾಜು ಮತ್ತು ನೈರ್ಮಲ್ಯ ಸಮಿತಿಗಳಿಗೆ / ಗ್ರಾಮ ಪಂಚಾಯತಿಗಳಿಗೆ ವಹಿಸಿಕೊಟ್ಟ ಯೋಜನೆಗಳ ಅಭಿವೃದ್ಧಿ / ಪುನರುಜ್ಜೀವನ ಕಾರ್ಯವನ್ನು ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಲಪ/14/ಪಿಪಿಎಂ/2002, ದಿನಾಂಕ: 15.2.2002ರ ಪ್ರಕಾರ ಸಾಮಾನ್ಯ ಗ್ರಾಮೀಣ ನೀರು ಸರಬರಾಜು ಕಾರ್ಯಕ್ರಮಗಳಡಿಯಲ್ಲಿ ಕೈಗೊಳ್ಳಬೇಕಾಗಿರುತ್ತದೆ. ಅದರಂತೆ ಕೆಟ್ಟು ಹೋಗಿರುವ ಹಾಗು ಜಲಮೂಲಗಳನ್ನು ಕಳೆದುಕೊಂಡಿರುವ ಯೋಜನೆಗಳನ್ನು ಪುನರುಜ್ಜೀವನಗೊಳಿಸಲು ಸರ್ಕಾರದ ವತಿಯಿಂದ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ